## ಜೆಎಸ್‌ಎಸ್ ಮಹಾವಿದ್ಯಾಪೀಠ
## ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–283

**27 ನವೆಂಬರ್ 2021 * ಶನಿವಾರ * ಸಂಜೆ 6.00**

## ಡಿಜಿಟಲ್ ಕಾರ್ಯಕ್ರಮ

**ದಿವ್ಯ ಸಾನ್ನಿಧ್ಯ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
ಸುತ್ತೂರು ಶ್ರೀಕ್ಷೇತ್ರ

**ಉಪನ್ಯಾಸ**



**ಡಾ. ಬಿ. ನಂಜುಂಡಸ್ವಾಮಿ**

ಆಯುರ್ವೇದ ವೈದ್ಯರು ಹಾಗೂ ಸಾಹಿತಿಗಳು
ತುಮಕೂರು

**ವಿಷಯ: ವಚನ ಸಾಹಿತ್ಯದ ಪ್ರಕಟಣೆಗಳು**

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

**ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ**

LIVE STREAMING

YouTube http://Youtube.com/c/JSSMahavidyapeethaonline

https://www.facebook.com/JSSMVP

ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಹಲವಾರು ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳನ್ನು ಸ್ಥಾಪಿಸಿ ಆ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ದಿನಾಂಕ 12.5.1996 ರಂದು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

ಡಾ. ಬಿ. ನಂಜುಂಡಸ್ವಾಮಿಯವರು ಶ್ರೀ ಎ. ಬಸವರಾಜು ಮತ್ತು ಶ್ರೀಮತಿ ಎನ್.ಪಿ. ಶಾರದಮ್ಮರವರ ದಂಪತಿಗಳ ಸುಪುತ್ರರಾಗಿ 25 ಆಗಸ್ಟ್ 1961 ರಂದು ತುಮಕೂರಿನಲ್ಲಿ ಜನಿಸಿದರು. ಪ್ರಾಥಮಿಕ, ಪ್ರೌಢಶಾಲಾ ಮತ್ತು ಪದವಿಪೂರ್ವ ವಿದ್ಯಾಭ್ಯಾಸವನ್ನು ಗುಬ್ಬಿಯಲ್ಲಿ ಪೂರೈಸಿ, ಬಳ್ಳಾರಿಯ ಸರ್ಕಾರಿ ಪಂಡಿತ್ ತಾರಾನಾಥ್ ಆಯುರ್ವೇದ ಮಹಾವಿದ್ಯಾಲಯದಿಂದ ಆಯುರ್ವೇದ ವೈದ್ಯ ಪದವಿಯನ್ನು 1986ರಲ್ಲಿ ಪಡೆದರು. ಅದೇ ವರ್ಷ ತುಮಕೂರಿನಲ್ಲಿ ಸಿದ್ಧಗಂಗಾ ಶ್ರೀಗಳವರಿಂದ ಶುದ್ಧ ಆಯುರ್ವೇದ ಚಿಕಿತ್ಸಾಲಯದ ಉದ್ಘಾಟನೆಯನ್ನು ನೆರವೇರಿಸಿ ವೈದ್ಯರಾಗಿ ವೃತ್ತಿಯನ್ನು ಆರಂಭಿಸಿದರು.

ವೃತ್ತಿಯ ಜೊತೆಗೆ ಬರಹಗಾರರಾಗಿ ಹಲವಾರು ಕೃತಿಗಳನ್ನು ರಚಿಸಿದ್ದಾರೆ, ಸಂಪಾದಿಸಿದ್ದಾರೆ. ಇವರ ಲೇಖನಗಳು ನಾಡಿನ ವಿವಿಧ ಪತ್ರಿಕೆಗಳಲ್ಲಿ ಪ್ರಕಟವಾಗಿವೆ. ನಮಃಶಿವಾಯ, ಚೆನ್ನುಡಿ, ಸಂತೃಪ್ತಿ, ಬಹುಧಾನ್ಯಸಿರಿ, ಧಾನ್ಯಲಕ್ಷ್ಮಿ, ಸುಜ್ಞಾನ ಬೋಧೆ, ಚಿತ್ಕಳೆ, ಮಾಗಡಿ ಶ್ರೀ ವೀರಪ್ಪಶಾಸ್ತ್ರಿಗಳು, ಶಿವಗಂಗಾಕ್ಷೇತ್ರ, ವೀರಶೈವ ಮಠಗಳು, ಶ್ರೀ ಸಿದ್ಧೇಶ್ವರ ವಿಜಯವು, ಹೊನ್ನಸಿರಿ, ಕಾಯಕಯೋಗಿ, ಹೊನ್ನುಡಿಕೆ ದರ್ಶನ, ಮುಡಿಮಾಣಿಕ್ಯ, ಕಲ್ಪಸಿರಿ, ಮಹಾದಾಸೋಹಿ, ಕರ್ನಾಟ ಕಲ್ಯಾಣಕಾರಕಂ, ಏಕೋತ್ತರ ಶತಸ್ಥಲ ವಚನಗಳು ಸೇರಿದಂತೆ ಹಲವಾರು ಕೃತಿಗಳು ಪ್ರಕಟವಾಗಿವೆ. ವೀರಶೈವ ಪ್ರತಿಭಾ ಸಂಪನ್ನ, ಶಿವಗಂಗಾಶ್ರೀ ಪ್ರಶಸ್ತಿ ಸೇರಿದಂತೆ ನಾಡಿನ ವಿವಿಧ ಮಠಗಳು, ಸಂಘ–ಸಂಸ್ಥೆಗಳಿಂದ ಸನ್ಮಾನ ಗೌರವಗಳಿಗೆ ಪಾತ್ರರಾಗಿದ್ದಾರೆ.